# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 892 |
| ಮಾನ್ಯ ಸದಸ್ಯರ ಹೆಸರು | ಡಾ: ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 26-12-2022 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಆರೋಗ್ಯ ಇಲಾಖೆಯಲ್ಲಿ ಎನ್.ಹೆಚ್.ಎಮ್ ಅಡಿಯಲ್ಲಿ ಸುಮಾರು 650 ಆಯುಷ್ ವೈದ್ಯರು ಪ್ರಾಥಮಿಕ ಆರೋಗ್ಯ ಕೇಂದ್ರ, ಸಮುದಾಯ ಆರೋಗ್ಯ ಕೇಂದ್ರ, ತಾಲ್ಲೂಕು ಆಸ್ಪತ್ರೆಗಳಲ್ಲಿ ಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವವರಿಗೆ ಕೇವಲ 23.000/- ಕನಿಷ್ಠ ವೇತನ ನೀಡಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಭಾರತ ಸರ್ಕಾರದ ರಾಷ್ಟ್ರೀಯ ಆರೋಗ್ಯ ಅಭಿಯಾನ ಆಯುಷ್ ಕಾರ್ಯಕ್ರಮದಡಿ ಪ್ರತಿ ವರ್ಷದ ಆರ್.ಓ.ಪಿ (Record of Proceedings) ಅನುಮೋದನೆಯಂತೆ 2022-23ನೇ ಸಾಲಿನಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ 650 ಆಯುಷ್ ವೈದ್ಯಾಧಿಕಾರಿಗಳಿಗೆ ಅವರ ಸೇವಾ ಅವಧಿಯ ಆಧಾರದ ಮೇರೆಗೆ ರೂ.24,260/- ಗಳಿಂದ ರೂ.34,532/-ರ ವರೆಗೆ ವೇತನ ನೀಡಲಾಗುತ್ತಿದೆ. |
| (ಆ) | ಆಗಸ್ಟ್ 2020 ಕೋವಿಡ್ ಸಂದರ್ಭದಲ್ಲಿ ಇವರ ಸಂಬಳವನ್ನು 45,000/-ಕ್ಕೆ ಹೆಚ್ಚಿಸುವ ಭರವಸೆಯನ್ನು ಸರ್ಕಾರವು ನೀಡಿದ್ದು, ಇಲ್ಲಿಯವರೆಗೆ ಸಂಬಳವನ್ನು ಹೆಚ್ಚಿಸದಿರುವುದಕ್ಕೆ ಕಾರಣವೇನು: (ವಿವರ ನೀಡುವುದು) | ಸಮಗ್ರ ಮಾನವ ಸಂಪನ್ಮೂಲ ಸಮಿತಿಯ 2021-22 ನೇ ಸಾಲಿಗೆ ಪಡೆಯುತ್ತಿರುವ ವೇತನಕ್ಕೆ ಶೇಕಡಾ 15% ರಷ್ಟು ಹೆಚ್ಚಳ ಮಾಡಲು ಶಿಫಾರಸ್ಸು ಮಾಡಿದ್ದು, 38 ವೃಂದಗಳಲ್ಲಿ ಒಟ್ಟು 17033 ಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುತ್ತಾರೆ.<br>ರಾಷ್ಟ್ರೀಯ ಆರೋಗ್ಯ ಅಭಿಯಾನವು ಕೇಂದ್ರ ಸರ್ಕಾರದ ಯೋಜನೆಯಾಗಿದ್ದು, ಈ ಯೋಜನೆಯಡಿ ಎಲ್ಲಾ ಹುದ್ದೆಗಳು ಯೋಜನೆಯು ಚಾಲ್ತಿಯಲ್ಲಿರುವವರೆಗೆ ಮಾತ್ರ ಇರುತ್ತವೆ. ಈ ಅಭಿಯಾನದಡಿಯಲ್ಲಿ ಯಾವುದೇ ಹುದ್ದೆಗಳು ಖಾಯಂ ಇರುವುದಿಲ್ಲ. ಈ ಹುದ್ದೆಗಳಿಗೆ ಆಯುಷ್ ವೈದ್ಯರುಗಳನ್ನು ತಾತ್ಕಾಲಿಕ ಆಧಾರದ ಮೇಲೆ ನೇಮಕ ಮಾಡಿಕೊಂಡಿದ್ದು, ಅವರ ಸೇವೆಯನ್ನು ಪರಿಗಣಿಸಿ ಪ್ರತಿ ವರ್ಷ ಸೇವಾ ಅವಧಿಯನ್ನು ಒಂದು ದಿನ ಮೊಟಕುಗೊಳಿಸಿ ಪುನಃ ಮುಂದುವರೆಸಲಾಗಿರುತ್ತದೆ.<br>ಈ ಹುದ್ದೆಗಳು ಸಂಪೂರ್ಣವಾಗಿ ತಾತ್ಕಾಲಿಕ ಹುದ್ದೆಗಳಾಗಿರುವುದರಿಂದ ಈ ಹುದ್ದೆಗಳ ಎದುರು ಕಾರ್ಯನಿರ್ವಹಿಸುತ್ತಿರುವ ಆಯುಷ್ ವೈದ್ಯರ ಸೇವೆಯನ್ನು ಖಾಯಂ ಮಾಡಲು ಅವಕಾಶವಿರುವುದಿಲ್ಲ. |
| (ಇ) | ಇವರ ವೇತನ ಪರಿಷ್ಕರಣೆಗೆ ಮತ್ತು ಖಾಯಂಯಾತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ಒದಗಿಸುವುದು) | |

ಕಡತ ಸಂಖ್ಯೆ: ಆಕುಕ 892 ಚುರಪ್ರ 2022
[HFW 108 STQ 2022]

(ಡಾ|| ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು